ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಪ್ರಾಥಮಿಕ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪದವೀಧರ ಶಿಕ್ಷಕರಿಗೆ ಬಡ್ತಿ ನೀಡುವ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):-

519 (486) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಪ್ರಾಥಮಿಕ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪದವೀಧರ ಶಿಕ್ಷಕರ ಸಂಖ್ಯೆ ಎಷ್ಟು ;

(ಆ) ಸದರಿ ಪದವೀಧರ ಶಿಕ್ಷಕರುಗಳಿಗೆ ಬಡ್ತಿ ನೀಡುವಲ್ಲಿ ಸರ್ಕಾರದ ವಿಳಂಬ ನೀತಿ ಅನುಸರಿಸುತ್ತಿರಲು ಕಾರಣಗಳೇನು ;

(ಇ) ಸದರಿ ಪದವೀಧರ ಶಿಕ್ಷಕರುಗಳಿಗೆ ಬಡ್ತಿ ನೀಡಿದ್ದಲ್ಲಿ ಉಂಟಾಗುವ ಸಮಸ್ಯೆಗಳೇನು ;

(ಈ) ಯಾವ ಕಾಲಮಿತಿಯಲ್ಲಿ ಸದರಿ ಪದವೀಧರ ಶಿಕ್ಷಕರುಗಳಿಗೆ ಬಡ್ತಿಯನ್ನು ನೀಡಲಾಗುವುದು ?